# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 311
ಸದಸ್ಯರ ಹೆಸರು : ಶ್ರೀ ಭೀಮರಾವ್ ಬಸವರಾಜ ಪಾಟೀಲ್
ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು
ಉತ್ತರಿಸುವ ದಿನಾಂಕ : 10.12.2025

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಬೀದರ್ ಜಿಲ್ಲೆಯು ಮಹಾರಾಷ್ಟ್ರ ಮತ್ತು ತೆಲಂಗಾಣ ಗಡಿ ಭಾಗ ಬೀದರ್ ಬಸ್ ನಿಲ್ದಾಣವು ಅವ್ಯವಸ್ಥೆ ಆಗರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | ಕಲ್ಯಾಣ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವ್ಯಾಪ್ತಿಯ ಬೀದರ್ ನಗರದಲ್ಲಿ ಎರಡು ಬಸ್ ನಿಲ್ದಾಣಗಳು ಕಾರ್ಯಾಚರಣೆಯಲ್ಲಿರುತ್ತವೆ. ಸದರಿ ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಅಗತ್ಯ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ಕುಳಿತುಕೊಳ್ಳುವ ಆಸನ, ಪುರುಷ ಮತ್ತು ಮಹಿಳಾ ಪ್ರಯಾಣಿಕರಿಗೆ ಪ್ರತ್ಯೇಕ ಶೌಚಾಲಯದ ವ್ಯವಸ್ಥೆ, ಹೆಣ್ಣು ಮಕ್ಕಳ ವಿಶ್ರಾಂತಿ ಕೊಠಡಿ, ಮಗುವಿಗೆ ಹಾಲು ಉಣಿಸುವ ಕೊಠಡಿ ಮುಂತಾದ ವ್ಯವಸ್ಥೆಗಳನ್ನು ಕಲ್ಪಿಸಲಾಗಿರುತ್ತದೆ.<br><br>ಎರಡೂ ಬಸ್ ನಿಲ್ದಾಣಗಳ ಸ್ವಚ್ಛತಾ ಕಾರ್ಯಕ್ಕಾಗಿ ಇ-ಟೆಂಡರ್ ಮೂಲಕ ಸ್ವಚ್ಛತಾ ಗುತ್ತಿಗೆದಾರರನ್ನು ಆಯ್ಕೆ ಮಾಡಿದ್ದು, ಸದರಿ ಗುತ್ತಿಗೆದಾರರಿಂದ ಬಸ್ ನಿಲ್ದಾಣಗಳ ಆವರಣವನ್ನು ಸ್ವಚ್ಛತೆಯಿಂದ ನಿರ್ವಹಣೆಯಾಗುವಂತೆ ಮೇಲ್ವಿಚಾರಣೆ ಮಾಡಲಾಗುತ್ತಿದೆ. ಅಲ್ಲದೇ ಸದರಿ ನಿಲ್ದಾಣಗಳ ಸ್ವಚ್ಛತೆಗೆ ಸಂಬಂಧಪಟ್ಟಂತೆ, ನಿಯಮಾವಳಿ ಪ್ರಕಾರ ಕರಾರು ಒಪ್ಪಂದ ಮಾಡಿಕೊಂಡ ಸ್ವಚ್ಛತಾ ಗುತ್ತಿಗೆದಾರರು ಸ್ವಚ್ಛತಾ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸದಿರುವುದು ಕಂಡುಬಂದಂತಹ ಪ್ರಕರಣಗಳಲ್ಲಿ, 05 ನೋಟಿಸ್‌ಗಳನ್ನು ಜಾರಿಗೊಳಿಸಿದ್ದು, ಒಂದು ಪ್ರಕರಣದಲ್ಲಿ ರೂ.1500/- ದಂಡ ಸಹ ವಿಧಿಸಲಾಗಿದೆ. ಇಂತಹ ಪ್ರಕರಣಗಳು ಮರುಕಳಿಸಿದಲ್ಲಿ ಟೆಂಡರ್ ನಿಯಮಾವಳಿ ಯನುಸಾರ ಸೂಕ್ತ ಕ್ರಮ ಜರುಗಿಸಲಾಗುವುದು.<br><br>ಬಸ್ ನಿಲ್ದಾಣಗಳಿಗೆ ವಿಭಾಗದ ಅಧಿಕಾರಿಗಳು ಭೇಟಿ ನೀಡಿ, ನಿಲ್ದಾಣದ ಸ್ವಚ್ಛತಾ ಕಾರ್ಯ ಸಮರ್ಪಕವಾಗಿರುವ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳುತ್ತಿರುತ್ತಾರೆ.<br><br>ಈಗಾಗಲೇ ಬಸ್ ನಿಲ್ದಾಣವನ್ನು ಉನ್ನತೀಕರಿಸಲಾಗಿದ್ದು, ಪ್ರಯಾಣಿಕರ ನಿರೀಕ್ಷಣಾ ಪ್ರಾಂಗಣ ವಿಸ್ತರಿಸಲಾಗಿದೆ ಮತ್ತು ಆವರಣಕ್ಕೆ ಪೆವ್‌ಮೆಂಟ್ ಕಾಂಕ್ರಿಟ್ ಅಳವಡಿಸಲಾಗಿದೆ. ಪ್ರತ್ಯೇಕವಾಗಿ ನಗರ ಸಾರಿಗೆ ಬಸ್‌ಗಳ ನಿಲುಗಡೆಗಾಗಿ ತಂಗುದಾಣ ನಿರ್ಮಿಸಲಾಗಿದೆ ಹಾಗೂ ಮುಂಭಾಗದಲ್ಲಿ ಹಸಿರೀಕರಣ ಮಾಡಲಾಗಿದೆ. ಆದ್ದರಿಂದ, ಪ್ರಸ್ತುತ ನಿಲ್ದಾಣವನ್ನು ಉನ್ನತೀಕರಿಸುವ ಪ್ರಸ್ತಾವನೆ ಇರುವುದಿಲ್ಲ. |
| ಆ. | ಬಸ್ ನಿಲ್ದಾಣದಲ್ಲಿ ದಿನನಿತ್ಯ ಹೊರ ರಾಜ್ಯ ಮತ್ತು ರಾಜ್ಯದ ಪ್ರಯಾಣಿಕರಿಗೆ ಶೌಚಾಲಯದ ಸ್ವಚ್ಛತೆ; ಇನ್ನಿತರ ಮೂಲಭೂತ ಸಮಸ್ಯೆಗಳಿಂದ ಪ್ರಯಾಣಿಕರಿಗೆ ತೊಂದರೆಯಾಗುತ್ತಿರುವುದರಿಂದ ಬಸ್ ನಿಲ್ದಾಣ ಸ್ವಚತೆ ನಿರ್ವಹಿಸುತ್ತಿರುವ ಸಿಬ್ಬಂದಿ ಅಥವಾ ಗುತ್ತಿಗೆ ಪಡೆದವರ ಮೇಲೆ ಕ್ರಮ ಕೈಗೊಳ್ಳಲಾಗಿದೆಯೆ; ( ಮಾಹಿತಿ ನೀಡುವುದು) | |
| ಇ. | ಬಸ್ ನಿಲ್ದಾಣ ಉನ್ನತೀಕರಿಸಲು ಸರ್ಕಾರ ಕೈಗೊಂಡ ಕ್ರಮವೇನು? (ಮಾಹಿತಿ ನೀಡುವುದು) | |

ಸಂಖ್ಯೆ: ಟಿಡಿ 203 ಟಿಸಿಕ್ಯೂ 2025

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು